ಇದರಲ್ಲಿ ರಾಮನಗರ ಕಾಲೇಜಿನ ಕಟ್ಟಡ ಕಾಮಗಾರಿಗೆ ರೂ.100.00 ಲಕ್ಷಗಳ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿತ್ತು. ಆದರೆ, ಸದರಿ ಕಾಲೇಜಿಗೆ ಮಂಜೂರು ಮಾಡಲಾಗಿದ್ದ ನಿವೇಶನವನ್ನು ಜಿಲ್ಲಾಧಿಕಾರಿಗಳು, ರಾಮನಗರ ಜಿಲ್ಲೆ, ರಾಮನಗರ ಇವರ ಆದೇಶದ ಪ್ರಕಾರ ಮಂಜೂರಾದ ನಿವೇಶನವನ್ನು ಹಿಂಪಡೆಯಲಾಗಿದ್ದು, ಬದಲಿ ನಿವೇಶನ ಮಂಜೂರಾತಿಗೆ ಬೇಡಿಕೆ ಸಲ್ಲಿಸಿದ್ದು, ನಿವೇಶನ ಮಂಜೂರಾದ ತಕ್ಷಣ ಕಟ್ಟಡ ಕಾಮಗಾರಿ ಪ್ರಾರಂಭಿಸಲಾಗುವುದು.

652 ಶ್ರೀ ಬಚ್ಚೇಗೌಡ ಕೆ.ಪಿ. : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಸರ್ಕಾರದಿಂದ ಉಪನ್ಯಾಸಕರ ಮತ್ತು ಇತರೆ ಸಿಬ್ಬಂದಿಗಳ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು;

ಆ) ಈಗ ಎಷ್ಟು ಹುದ್ದೆಗಳನ್ನು ತುಂಬಲಾಗಿದೆ ಹಾಗೂ ತುಂಬಲಾಗದಿದ್ದಲ್ಲಿ, ಅದಕ್ಕೆ ಕಾರಣಗಳೇನು;

ಇ) ಚಿಕ್ಕಬಳ್ಳಾಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಉಪನ್ಯಾಸಕರ ಮತ್ತು ಇತರೆ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಉ) ಉಪನ್ಯಾಸಕರ ಕೊರತೆಯಿಂದಾಗಿ ವಿದ್ಯಾರ್ಥಿಗಳ ಭವಿಷ್ಯಕ್ಕೆ ತೊಂದರೆಯಾಗುವುದಿಲ್ಲವೇ;

ಊ) ಹಾಗಿದ್ದಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಕೂಡಲೇ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಕ್ರಮ ಕೈಗೊಳ್ಳುವುದೇ; (ವಿವರ ನೀಡುವುದು)?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :

ಅ) ಉಪನ್ಯಾಸಕರ ಸಂಖ್ಯೆ : 42
ಇತರೆ ಸಿಬ್ಬಂದಿಗಳ ಸಂಖ್ಯೆ : 33

ಆ) ಉಪನ್ಯಾಸಕರು 32
ಇತರೆ ಸಿಬ್ಬಂದಿಗಳ ಸಂಖ್ಯೆ : 18

ಸುಮಾರು 2550 ವಿವಿಧ ವಿಷಯಗಳ ಉಪನ್ಯಾಸಕರುಗಳ ನೇಮಕಾತಿ ಕುರಿತು ಕೆ.ಪಿ.ಎಸ್.ಸಿ.ಯು ಅಂತಿಮ ಆಯ್ಕೆ ಪಟ್ಟಿ ಸರ್ಕಾರಕ್ಕೆ ಸಲ್ಲಿಸಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ. ಕೆಲವು ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆ ಪ್ರಶ್ನಿಸಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ದಾಖಲಿಸಿರುವರು. ಪ್ರಸ್ತುತ ಈ ವಿಷಯ ಕೆ.ಎ.ಟಿ. ಮುಂದೆ ಇದ್ದ ನ್ಯಾಯಾಲಯದ ತೀರ್ಪು ಹೊರಬಂದ ನಂತರ ಖಾಲಿ ಇರುವ ಈ ಉಪನ್ಯಾಸಕರುಗಳ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು. ಹಾಗೂ ಕೆಲವು ಬೋಧಕೇತರ ಹುದ್ದೆಗಳನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಹೌದು.

ಈ) ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳಲು ಪ್ರಾಂಶುಪಾಲರಿಗೆ ಅನುಮತಿ ನೀಡಲಾಗಿದೆ.

ದ್ವಿತೀಯ ದರ್ಜೆ ಸಹಾಯಕರ ಆಯ್ಕೆ ಪಟ್ಟಿ ಬಂದ ನಂತರ ಸದರಿ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು. ಹಾಗೂ ಗ್ರೂಪ್-ಡಿ ನೌಕರರನ್ನು ಬಾಹ್ಯ ಮೂಲದಿಂದ ಭರ್ತಿ ಮಾಡಿಕೊಳ್ಳಲು ಪರಿಶೀಲಿಸಲಾಗುತ್ತಿದೆ.

ಉ) ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳಲು ಪ್ರಾಂಶುಪಾಲರಿಗೆ ಅನುಮತಿ ನೀಡಲಾಗಿದೆ.

ಊ) ಕೆಲವು ಅಭ್ಯರ್ಥಿಗಳು ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಮೊರೆ ಹೊಕ್ಕಿದ್ದು ಪ್ರಕರಣ ಇತ್ಯರ್ಥವಾದ ಕೂಡಲೇ ನೇಮಕಾತಿ ಆದೇಶ ನೀಡಲಾಗುವುದು.

1094 ಶ್ರೀಮತಿ ಅನಿತಾ ಕುಮಾರಸ್ವಾಮಿ (ಮಧುಗಿರಿ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಒಂದು ವರ್ಷದಲ್ಲಿ ಸರ್ಕಾರದಿಂದ ಮಧುಗಿರಿ ವಿಧಾನ ಸಭಾ ಕ್ಷೇತ್ರಕ್ಕೆ ಮಂಜೂರಾದ ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆ ಎಷ್ಟು ಮತ್ತು ಎಲ್ಲೆಲ್ಲಿ ಅಳವಡಿಸಲಾಗಿದೆ? (ವಿವರಗಳನ್ನು ನೀಡುವುದು)

ಆ) ಇಲ್ಲದಿದ್ದಲ್ಲಿ, ಕಾರ್ಯನಿರ್ವಹಿಸದೇ ಇರುವ ಟ್ರಾನ್ಸ್‌ಫಾರ್ಮರ್‌ಗಳನ್ನು ಬದಲಾವಣೆ ಮಾಡುವ ಅಥವಾ ದುರಸ್ತಿ ಮಾಡಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೆ?